ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜೀಯವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 88

ಮೃತಪಟ್ಟ ಬದರಇರ್ಮಾಖಾನಾಯಿಕರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಸೈದ್ ಮೋರ್ಮೆಷಾಖಾದ್ರಿಯು, ಮೃತಪಟ್ಟ ಸದರೀ ಬದರಇರ್ಮಾಖಾನಾಯಿಕರಿಗೆ ಯೇಜಂಟ್ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಸ್ಥಳದ ಸದರೀ ಮೋರ್ಮೆಷಾಖಾದ್ರಿಯು ಸದರೀ ವಾರಸ್ಥರಾಗಿ ಮೃತಪಟ್ಟ ಬದರಇರ್ಮಾಖಾನಾಯಿಕರ ಜೆಂದಗಿ ಬಗ್ಯಾಗಿ ಬರತಕ್ಕ 200 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಸೈದ್ ಮೋರ್ಮೆಷಾಖಾದ್ರಿಯ ಅರ್ಜಿಯನ್ನು 1887ನೇ ಇಸವಿ ಜೂನ್ ತಿಂಗಳು ತಾರೀಖು 14ರೆಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ನಿರ್ಮಿಸಿ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಬದರಇರ್ಮಾಖಾನಾಯಿಕರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

ಸ್ಯ 1887ನೇ ಇಸವಿ ಮಾರ್ಚೀ ತಿಂಗಳು 26ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಎಸ್. ಹೇಮಾಜಿರಾವ್,

ಡಿಸ್ಟ್ರಿಕ್ಟ್ ಜಡ್ಜ್.

ಮೈಸೂರು ಸಬ್ ಜಡ್ಜೀಯವರ ಕೋರ್ಟಿನ ಲ್ಲಿ.

ದಿವಾಳಿಯಾದ ಡಿಕ್ರಿ ದೇಣೇದಾರ ಮಂಜಿರಾಬಾದ್ ತಾಲ್ಲೂಕು ಬ್ಯಾಗಡಹಳ್ಳಿ ಹೋಬಳಿ ಕೇಕದಾರ್ ಅಕಬರ್‌ಮೊಹದೀರ್‌ಸಾಬನ ವಿಷಯದಲ್ಲಿ—

ಸ್ಯ 1886ನೇ ಇಸವಿ ದಿವಾಳಿ ಕೇಸ್ ನಂಬರು 251.

ಹುಕ್ಕುಂ

ಮೇಲ್ಕಂಡ ಅಕಬರ್‌ಮೊಹದೀರ್‌ಸಾಬನು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಕವು ಈ ಕೋರ್ಟು ರೂಬರೂ ಅರ್ಜೀದಾರನಾವ ಅಕಬರ್ ಮೊಹದೀರ್‌ಸಾಬಿ ಖುದ್ದು ಹಾಜರು ಇವನ್ನ ದರ್ಯಾಪ್ತು ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮಗೆ ಈ ಪರ್ಯಾಪ್ತೀ ನೋಟೀಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರೆಂದರೆ—1ನೇ ಸುಬ್ಬಣ್ಣಾಚಾರಿ, 2ನೇ ಗುಲಾಂ ಮೊಹದೀರ್‌ಸಾಬ 3ನೇ ಅಬ್ದುಲ್ಲಾಸಾಬ.

ಸಿವಿರ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನ ಸದರೀ ಅಕಬರ್‌ಮೊಹದೀರ್‌ಸಾಬನು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳಿಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳಿಯಾದವನ್ನ ನಿರ್ಬಂಧದಿಂದ ವಿಮೋಚನೆ ಮಾಡಿರುವದಲ್ಲದೆ ಇದಕ್ಕೆ ಲಗ್ಗತ್ತಾಗಿರುವ ಪಟ್ಟಿಯಲ್ಲಿ ಕಾಣಿ ಯಾವ ಸಾಲಕ್ಕೋಸ್ಕರವಾಗಿಯಾಗಲಿ ದಸ್ತಗಿರಿ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರಿಯಿಂದ ಸಹ ಅವನ್ನ ನಿಖಾಲಸ್ ಮಾಡಲಾಗಿರುತ್ತೆಯೆಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

ಸ್ಯ 1887ನೇ ಇಸವಿ ಮಾರ್ಚೀ 23ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ದಸ್ತಖತ್‌ನಿಂದ ಕೊಡಲ್ಪಟ್ಟಿತು.

ಸಾಲದ ಪಟ್ಟಿ.

ನಂಬರು.	ಲೇಣೇದಾರ್ರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರೆಗಳ ವಾಸಸ್ಥಳ.	ಜೊಬಲಗು.	ರೂ.	ಆ.	ಪೈ.	ದೇಣೆಯ ಸ್ವಭಾವವೆತ್ತು ಅದರ ಪ್ರತಿಫಲ ಮತ್ತು ಗಿರ್ವಿಯೇನಾದರೂ ಇದ್ದರೆ.	ಟಿಪ್ಪಣಿ.
1	ಹೊಳೇನರಸೀಪುರದಲ್ಲಿರುವ ಕುಂಭಕೋಣೆ ಸುಬ್ಬಣ್ಣಾಚಾರ್ರು	256	3	0		ಡಿಕ್ರೀ ಬಾಬತು	

ಸಿ. ಶ್ರೀನಿವಾನಯ್ಯಂಗಾರ್,

ಸಬ್ ಜಡ್ಜ್.